RNU AIR DHARWAD

OCTOBER 13, 2026

**AKASHAVANI - DHARWAD**

**PRADESH SAMACHARA (KANNADA) 07.05 A.M.**

<><><>

**ಮುಖ್ಯಾಂಶಗಳು:**

- **ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾಕ್ಟರ ಸುಧಾ ಯಾದವ ನೇಮಕ.**
- **ಕ್ರೀಡಾ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ; ರಾಜ್ಯದ 14 ಜಿಲ್ಲೆಗಳಲ್ಲಿ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣಕ್ಕೆ ಕ್ರಮ – ಉಪಮುಖ್ಯಮಂತ್ರಿ ಡಾಕ್ಟರ್ ಜಿ. ಪರಮೇಶ್ವರ.**
- **ರಾಜ್ಯದ ರೈಲ್ವೇ ಕ್ಷೇತ್ರದ ವಿಕಾಸಕ್ಕಾಗಿ ಕೇಂದ್ರ ಸರ್ಕಾರದ ಐತಿಹಾಸಿಕ ನಿರ್ಣಯ – ಕೇಂದ್ರ ಸಚಿವ ವಿ. ಸೋಮಣ್ಣ.**
- **'ಪ್ರಧಾನ ಮಂತ್ರಿ ಉಜ್ವಲ ಯೋಜನೆ' ಬಡ ಕುಟುಂಬಗಳ ಮಹಿಳೆಯರ ಘನತೆ, ಆರೋಗ್ಯ ಮತ್ತು ಸಮಾನ ಅವಕಾಶಗಳ ಗುರಿ ಸಾಧನೆ.**
- **ಕಬ್ಬು ಬೆಳೆಗಾರರ ಸಮಸ್ಯೆ ನಿವಾರಣೆಗೆ ಉನ್ನತ ಮಟ್ಟದಜಂಟಿ ಸಮಿತಿ ರಚನೆಗೆ ನಿರ್ಧಾರ– ಕೇಂದ್ರ ಸಚಿವ ಪ್ರಲ್ಹಾದ ಜೋಶಿ**

**ವಾರ್ತೆಗಳ ವಿವರ...**

<><><>

**ರಾಷ್ಟ್ರಪತಿ ದ್ರೌಪದಿ ಮುರ್ಮು ಆರು ರಾಜ್ಯಗಳಿಗೆ ಹೊಸ ರಾಜ್ಯಪಾಲರ ನೇಮಕ** ಆದೇಶ ಹೊರಡಿಸಿದ್ದಾರೆ. ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾಕ್ಟರ ಸುಧಾ ಯಾದವ ನೇಮಕಗೊಂಡಿದ್ದಾರೆ. ಹರ್ಯಾಣ ಮೂಲದವರಾಗಿರುವ ಸುಧಾ ಯಾದವ್ 1999 ರಲ್ಲಿ ಲೋಕಸಭಾ ಸಂಸದರಾಗಿ ಸೇವೆ ಸಲ್ಲಿಸಿದ್ದರು. ಕಾರ್ಗಿಲ್ ಹುತಾತ್ಮ ಸೇನಾಧಿಕಾರಿ ಪತ್ನಿಯಾಗಿರುವ ಅವರು ಬಿಜೆಪಿ ಸಂಸದೀಯ ಮಂಡಳಿ ಸದಸ್ಯರು. ನೂತನ ರಾಜ್ಯಪಾಲರಾಗಿ ನೇಮಕಗೊಂಡಿರುವ ಡಾಕ್ಟರ ಸುಧಾ ಯಾದವ್ ಅವರಿಗೆ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ಉಪ ಮುಖ್ಯಮಂತ್ರಿ ಡಾಕ್ಟರ ಜಿ.ಪರಮೇಶ್ವರ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ ಸೇರಿದಂತೆ ಗಣ್ಯರು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

<><><>

**ರಾಜ್ಯದ ಕ್ರೀಡಾಪಟುಗಳಿಗೆ ಗುಣಮಟ್ಟದ ತರಬೇತಿ ಸೌಲಭ್ಯಗಳನ್ನು ಒದಗಿಸಿ, ರಾಷ್ಟ್ರೀಯ** ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಲು ಪ್ರೋತ್ಸಾಹಿಸುವ ಉದ್ದೇಶದಿಂದ ಕ್ರೀಡಾ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗಿದೆ ಎಂದು ಕ್ರೀಡಾ ಖಾತೆ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಾಕ್ಟರ್ ಜಿ.ಪರಮೇಶ್ವರ ಹೇಳಿದ್ದಾರೆ. ರಾಜ್ಯದ 14 ಜಿಲ್ಲೆಗಳಲ್ಲಿ ಸಿಂಥೆಟಿಕ್ ಟ್ರ್ಯಾಕ್‌ಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದರಿಂದ ಕ್ರೀಡಾಪಟುಗಳಿಗೆ ತಮ್ಮದೇ ಜಿಲ್ಲೆಗಳಲ್ಲಿ ಉತ್ತಮ ತರಬೇತಿ ಪಡೆಯಲು ಹಾಗೂ ಕ್ರೀಡಾ ಸಾಮರ್ಥ್ಯವನ್ನು ಮತ್ತ ್ವ ಹೆಚ್ಚಿಸಿಕೊಳ್ಳಲು ಅವಕಾಶ ದೊರೆಯಲಿದೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಹೇಳಿದ್ದಾರೆ. ಕ್ರೀಡಾ ಪ್ರತಿಭೆಗಳಿಗೆ ಸೂಕ್ತ ವೇದಿಕೆ, ಗುಣಮಟ್ಟದ ಮೂಲಸೌಕರ್ಯ ಮತ್ತು ತರಬೇತಿ ಸೌಲಭ್ಯಗಳನ್ನು ಒದಗಿಸುವ ಮೂಲಕ ರಾಜ್ಯದ ಕ್ರೀಡಾ ಕ್ಷೇತ್ರವನ್ನು ಮತ್ತ ್ವ ಬಲಪಡಿಸಲು ನಮ್ಮ ಸರ್ಕಾರ ಬದ್ಧವಾಗಿದೆ ಎಂದು ಹೇಳಿದ್ದಾರೆ.

<><><>

**ಕೊಂಕಣ ರೈಲ್ವೆಯ ಮುಂದುವರಿದ ಅಭಿವೃದ್ಧಿ ಕಾಮಗಾರಿಗಳಿಗೆ 9000ಕೋಟಿ** ರೂಪಾಯಿಗಳನ್ನು ಮಂಜೂರು ಮಾಡುವುದರೊಂದಿಗೆ ಹಲವು ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ಹಲವು ಯೋಜನೆಗಳನ್ನು ಕೈಗೆತ್ತಿಕೊಳ್ಳುವ ಮೂಲಕ ರಾಜ್ಯದ ರೈಲ್ವೇ ಕ್ಷೇತ್ರದ ವಿಕಾಸಕ್ಕಾಗಿ ಕೇಂದ್ರ ಸರ್ಕಾರವು ಐತಿಹಾಸಿಕ ನಿರ್ಣಯ ಕೈಗೊಂಡಿದೆ ಎಂದು ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದ್ದಾರೆ. ಶಿವಮೊಗ್ಗ ಲೋಕಸಭಾ ಕ್ಷೇತ್ರದ ವ್ಯಾಪ್ತಿಗೊಳಪಡುವ ರೈಲ್ವೆ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿದ ನಂತರ ಮಾತನಾಡಿದ ಅವರು, ರಾಜ್ಯದಲ್ಲಿ 52 ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಹಲವು ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗುವುದು. ಮುಂದಿನ 25–30 ವ ್ಗಗಳ ಅವಧಿಯ ದೂರದೃಷ್ಟಿಯನ್ನಿಟ್ಟುಕೊಂಡು ರೈಲ್ವೆ ಯೋಜನೆಗಳನ್ನು ರೂಪಿಸಿ ಅನು ್ಠಾನಗೊಳಿಸಲು ಉದ್ದೇಶಿಸಲಾಗಿದೆ ಎಂದರು. ಶಿವಮೊಗ್ಗ–ಶಿಕಾರಿಪುರ–ರಾಣೆಬೆನ್ನೂರು ರೈಲ್ವೇ ಯೋಜನೆಯ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರ್ಪಡೆಗೊಳಿಸಲಾಗುವುದು, ಶಿವಮೊಗ್ಗ–ಬೀರೂರು ರೈಲ್ವೆ ಮಾರ್ಗದ ಡಬ್ಲಿಂಗ್‌ಗೆ ಈಗಾಗಲೇ ಸರ್ವೆ ಕಾರ್ಯ ನಡೆಯುತ್ತಿದೆ. ಶೃಂಗೇರಿ–ಶಿವಮೊಗ್ಗ ಹೊಸ ರೈಲು ಮಾರ್ಗದ ಪ್ರಸ್ತಾವನೆಯೂ ಪ್ರಗತಿಯಲ್ಲಿದೆ ಎಂದರು. ವಿಶೇ ್ಷವಾಗಿ ಮಂಗಳೂರು, ಉಡುಪಿ, ಶಿವಮೊಗ್ಗ ಭಾಗಗಳ ರೈಲ್ವೆ ಸಂಪರ್ಕ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದ ಬೇಡಿಕೆಗಳನ್ನು ಪರಿಶೀಲಿಸಲಾಗಿದೆ. 2018ರಲ್ಲಿ ಅನುಮೋದಿತಗೊಂಡಿದ್ದ ಶಿವಮೊಗ್ಗ–ಶೃಂಗೇರಿ–ಮಂಗಳೂರು ರೈಲ್ವೇ ಮಾರ್ಗಕ್ಕೆ 2025ರಲ್ಲಿಯೇ ಅಂತಿಮ ಹಂತದ ಸರ್ವೇ ಕಾರ್ಯಕ್ಕೆ ಚಾಲನೆ ನೀಡಲಾಗಿದೆ. 178ಕಿ.ಮೀ. ದೂರದ ತಾಳಗುಪ್ಪ–ಸಿದ್ಧಾಪುರ–ಸಿರ್ಸಿ–ಮುಂಡಗೋಡ–ಹುಬ್ಬಳ್ಳಿ ಮಾರ್ಗದ ಸರ್ವೇ ಕಾರ್ಯವನ್ನು ಶೀಘ್ರದಲ್ಲಿ ಕೈಗೆತ್ತಿಕೊಳ್ಳಲಾಗುವುದು ಎಂದು ಹೇಳಿದರು.

<><><>

**ಮಾನವ ಹಕ್ಕು ರಕ್ಷಣೆ ಬಲಗೊಳಿಸುವ ಕಾರ್ಯದಲ್ಲಿ ರಾಷ್ಟ್ರೀಯ ಮಾನವ ಹಕ್ಕುಗಳ** ಆಯೋಗ – ಎನ್.ಎಚ್.ಆರ್.ಸಿ. N.H.R.C. ಮುನ್ನಡೆಯುತ್ತಿದ್ದು, ನಾಗರಿಕರ ನ್ಯಾಯ ಮತ್ತು ಘನತೆಯ ರಕ್ಷಣೆ ಖಾತ್ರಿಪಡಿಸುತ್ತಿದೆ ಎಂದು ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಹೇಳಿದ್ದಾರೆ. ದೆಹಲಿಯಲ್ಲಿ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ 33ನೇ ಸಂಸ್ಥಾಪನಾ ದಿನದ ಕಾರ್ಯಕ್ರಮದಲ್ಲಿ ಅವರು, ಕಳೆದ 33 ವ ್ಗಗಳಲ್ಲಿ – ಎನ್.ಎಚ್.ಆರ್.ಸಿ. ((NHRC) ಯಲ್ಲಿ 24 ಲಕ್ಷ ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 23 ಲಕ್ಷ ಪ್ರಕರಣಗಳು ಇತ್ಯರ್ಥಗೊಂಡಿವೆ. ಈ ಮೂಲಕ ಪ್ರಕರಣ ವಿಲೇವಾರಿಯಲ್ಲಿ ಶೇಕಡ 98ರ ್ವ ಪ್ರಗತಿ ಸಾಧಿಸಲಾಗಿದೆ ಎಂದರು. ಆಯೋಗದ ಮೊಬೈಲ್ ಆ್ಯಪ್‌ನಿಂದ ನಾಗರಿಕರು ಸುಲಭವಾಗಿ ದೂರುಗಳನ್ನು ದಾಖಲಿಸಬಹುದಾಗಿದ್ದು, ದೂರುಗಳ ಪ್ರಗತಿಯ ಮಾಹಿತಿಯನ್ನು ಪಡೆಯಬಹುದಾಗಿದೆ. ಕಸ್ಟಡಿ ದೌರ್ಜನ್ಯ, ಕೈಗಾರಿಕಾ ಶೋ ್ಷಣೆ, ಜೀತ ಕಾರ್ಮಿಕ ಪದ್ಧತಿ ಒಳಗೊಂಡ ಪ್ರಕರಣಗಳಲ್ಲಿ ಆಯೋಗವು ಮಧ್ಯ ಪ್ರವೇಶಿಸಿ ನ್ಯಾಯ ಒದಗಿಸುತ್ತಿವೆ ಎಂದರು.

<><><>

**ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳಿಗೆ ಹೆಚ್ಚಿಸಲಾಗಿದ್ದ** ಮೀಸಲಾತಿ ಪ್ರಮಾಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಮಹತ್ವದ ಆದೇಶ ಹೊರಡಿಸಿದೆ. ಪರಿಶಿಷ್ಟ ಜಾತಿಯ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಹಾಗೂ ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ.3ರಿಂದ ಶೇ.7ಕ್ಕೆ ಹೆಚ್ಚಿಸಿದ್ದ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೀಸಲಾತಿ ಅಧಿನಿಯಮ–2022 ಅನ್ನು ಹೈಕೋರ್ಟ್ ರದ್ದುಗೊಳಿಸಿದೆ.ಶೈಕ್ಷಣಿಕ ಸಂಸ್ಥೆಗಳು ಹಾಗೂ ರಾಜ್ಯ ಸರ್ಕಾರಿ ಸೇವೆಗಳಲ್ಲಿ ಮೀಸಲಾತಿ ಹೆಚ್ಚಳವನ್ನು ಪ್ರಶ್ನಿಸಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಕೆ.ಎಸ್. ಹೇಮಲೇಖಾ ಅವರನ್ನೊಳಗೊಂಡ ವಿಭಾಗೀಯ ಪೀಠ ಈ ಆದೇಶ ನೀಡಿದೆ.

<><><>

**ಈಗ ಪ್ರಕಟಣೆ ಬಳಿಕ ಪ್ರದೇಶ ಸಮಾಚಾರ ಮುಂದುವರಿಯುವುದು**

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**'ಜನ ಸೇವೆಯಿಂದ ದೇಶ ಸೇವೆ' ಎಂಬ ಮಂತ್ರದಡಿ ಜನರ ಏಳಿಗೆಯ ಅಚಲ** ಬದ್ಧತೆಯೊಂದಿಗೆ, ಸಾರ್ವಜನಿಕ ಸೇವೆಯ 25 ವರ್ಷಗಳ ಪಯಣವನ್ನು ಪ್ರಧಾನಿ ನರೇಂದ್ರ ಮೋದಿ ಪೂರೈಸಿದ್ದಾರೆ. ಸೇವೆ ಮತ್ತು ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, 2047ರ ವೇಳೆಗೆ **'ವಿಕಸಿತ ಭಾರತ'** ಗುರಿ ಸಾಧನೆಯತ್ತ ಸಾಗುತ್ತಿದೆ. ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ **'ಪ್ರಧಾನ ಮಂತ್ರಿ ಉಜ್ವಲ ಯೋಜನೆ'**ಕುರಿತ ಒಂದು ವರದಿ ಇಲ್ಲಿದೆ. 2016 ರಲ್ಲಿ ಪ್ರಾರಂಭವಾದ 'ಪ್ರಧಾನ ಮಂತ್ರಿ ಉಜ್ವಲ ಯೋಜನೆ'ಯು ವಿಶೇಷವಾಗಿ ಬಡ ಕುಟುಂಬಗಳ ಮಹಿಳೆಯರಿಗೆ ಸ್ವಚ್ಛ ಅಡುಗೆ ಇಂಧನವನ್ನು ಘನತೆ, ಆರೋಗ್ಯ ಮತ್ತು ಸಮಾನ ಅವಕಾಶದ ವಿಷಯವನ್ನಾಗಿ ಮಾಡುವ ಗುರಿಯನ್ನು ಹೊಂದಿತ್ತು. ಎಲ್‌ಪಿಜಿಯನ್ನು ಕೇವಲ ಮಧ್ಯಮ ವರ್ಗದವರ ಅನುಕೂಲದ ಸಾಧನವೆಂದು ಪರಿಗಣಿಸುವ ಬದಲು, ಈ ಯೋಜನೆಯು ಸಾಮಾನ್ಯ ಮಹಿಳೆಯರ ಹೆಸರಿನಲ್ಲಿಯೇ ಸಂಪರ್ಕವನ್ನು ಒದಗಿಸಿತು. ಇದು ಲಕ್ಷಾಂತರ ಕುಟುಂಬಗಳನ್ನು ಸೌದೆ, ಸಗಣಿ ಉಂಡೆಗಳು ಮತ್ತು ಇತರ ಮಾಲಿನ್ಯಕಾರಕ ಇಂಧನಗಳಿಂದ ದೂರವಿರಿಸಲು ಸಹಾಯ ಮಾಡುವುದರ ಜೊತೆಗೆ, ಮನೆಯ ನಿರ್ಧಾರಗಳನ್ನು ತೆಗೆದುಕೊಳ್ಳುವ ಪ್ರಕ್ರಿಯೆಯಲ್ಲಿ ಮಹಿಳೆಯರಿಗೆ ಸ್ಥಾನವನ್ನೂ ಕಲ್ಪಿಸಿಕೊಟ್ಟಿತು. ಮೇ 2026 ರ ವೇಳೆಗೆ, ಬಡ ಕುಟುಂಬಗಳ ಮಹಿಳೆಯರಿಗೆ 10.5 ಕೋಟಿಗೂ ಹೆಚ್ಚು ಉಚಿತ ಎಲ್‌ಪಿಜಿ ಸಂಪರ್ಕಗಳನ್ನು ಒದಗಿಸಲಾಗಿತ್ತು. ಈ ಯೋಜನೆಯು ನಿರಂತರ ಬಳಕೆಯನ್ನು ಉತ್ತೇಜಿಸುವ ನಿಟ್ಟಿನಲ್ಲೂ ವಿಸ್ತರಣೆಗೊಂಡಿತು: ಪ್ರತಿ ಫಲಾನುಭವಿಗೆ ಸಿಲಿಂಡರ್ ಮರುಭರ್ತಿ ಬಳಕೆಯು 2021–22ರ ಆರ್ಥಿಕ ವರ್ಷದಲ್ಲಿ ಸುಮಾರು 3 ರಷ್ಟಿದ್ದದ್ದು, 2025–26 ರ ಆರ್ಥಿಕ ವರ್ಷದಲ್ಲಿ ಸುಮಾರು 5 ಕ್ಕೆ ಏರಿತು; 2025–26 ರ ಆರ್ಥಿಕ ವರ್ಷದಲ್ಲಿ 49 ಕೋಟಿಗೂ ಹೆಚ್ಚು PMUY ಸಿಲಿಂಡರ್‌ಗಳನ್ನು ವಿತರಿಸಲಾಯಿತು.

<><><>

**ಪ್ರಧಾನಮಂತ್ರಿ ಉಜ್ವಲ ಯೋಜನೆ**ವಿಶೇಷತೆ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಧಾರವಾಡದ ಎಚ್.ಪಿ ಗ್ಯಾಸ್ ಏಜನ್ಸಿ ಗಣೇಶ ಟ್ರೇಡರ್ಸ್ ಪ್ರವರ್ತಕರಾದ ರವಿಕಿರಣ ಭಟ್

<><><>

**ರವಿಕಿರಣ ಭಟ್ ಧ್ವನಿ –44ಸೆಕೆಂದುಗಳು**

<><><>

**ಕರ್ನಾಟಕ ಹಾಗೂ ಮಹಾರಾಷ್ಟ್ರದ ರೈತ ಮುಖಂಡರು ಹಾಗೂ ವಿವಿಧ ರೈತ** ಸಂಘಟನೆಗಳ ಪ್ರತಿನಿಧಿಗಳ ನೇತೃತ್ವದಲ್ಲಿ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರ ಉಪಸ್ಥಿತಿಯಲ್ಲಿ ಕಬ್ಬು ಹಾಗೂ ಸಕ್ಕರೆಗೆ ಸಂಬಂಧಿಸಿದ ಸಭೆ ನಡೆಸಲಾಯಿತು ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.ಸಭೆಯಲ್ಲಿ ಕಬ್ಬು ಬೆಳೆಗಾರರಿಗೆ ಸಂಬಂಧಿಸಿದ ಪ್ರತಿಯೊಂದು ಸಮಸ್ಯೆಗಳನ್ನು ಕುರಿತು ವಿಸ್ತೃತವಾಗಿ ಚರ್ಚಿಸಲಾಯಿತು ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಅವರು ತಿಳಿಸಿದ್ದಾರೆ. ಕಬ್ಬು ಬೆಳೆಗಾರರಿಗೆ ವೇಸ್ಟೇಜ್ ನಲ್ಲಿನ ಮೋಸ, ತೂಕದಲ್ಲಿ ಆಗುತ್ತಿರುವ ಮೋಸ, ಸಕ್ಕರೆ ಇಳುವರಿಯಲ್ಲಿ ಮೋಸವಾಗುತ್ತಿದ್ದು, ಈ ವಿ ಯಗಳಲ್ಲಿ ರೈತರಿಗೆ ಆಗುತ್ತಿರುವ ಅನ್ಯಾಯದ ಕುರಿತು ಹಾಗೂ ಎಫ್.ಆರ್.ಪಿ (FRP) ಎಸ್.ಎ.ಪಿ(SAP-Minimum Selling Price), ಎಥನಾಲ್ ಹಾಗೂ ಇನ್ನು ಹಲವು ವಿ ಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಲಾಯಿತು ಎಂದು ಹೇಳಿದ್ದಾರೆ. ರೈತ ಮುಖಂಡರು ಪ್ರಸ್ತಾಪಿಸಿದ ಬೇಡಿಕೆಗಳು ಮತ್ತು ಸಲಹೆಗಳನ್ನು ಪರಿಗಣಿಸಿ, ರೈತರ ಹಿತದೃಷ್ಟಿಯಿಂದ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ಹಾಗೂ ಅವರ ಆಶೋತ್ತರಗಳಿಗೆ ಸ್ಪಂದಿಸಲು ಒಂದು ವಾರದೊಳಗೆ ಕೇಂದ್ರ ಕೃಷಿ ಸಚಿವಾಲಯ ಅಧಿಕಾರಿಗಳು, ರಾಜ್ಯ ಸರ್ಕಾರದ ಅಧಿಕಾರಿಗಳು, ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳು ಹಾಗೂ ರೈತ ಮುಖಂಡರನ್ನು ಒಳಗೊಂಡಒಂದು ಉನ್ನತ ಮಟ್ಟದಜಂಟಿ ಸಮಿತಿಯನ್ನುರಚಿಸಲಾಗುವುದು ಎಂದೂ ಅವರು ತಿಳಿಸಿದ್ದಾರೆ.

<><><>

**ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ಎಲೆನಾದವಗಿ ಗ್ರಾಮದಲ್ಲಿ, ಕಟ್ಟಡ ಮತ್ತು** ಇತರೆ ನಿರ್ಮಾಣ ಕಾರ್ಮಿಕರ ಮಂಡಳಿಯಲ್ಲಿ ನೋಂದಾಯಿತರಾಗಿರುವ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ ಶಾಲೆ ನಿರ್ಮಿಸಲು 10 ಎಕರೆ ಜಮೀನು ಮಂಜೂರಾಗಿದೆ ಎಂದು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ ಖರ್ಗೆ ತಿಳಿಸಿದ್ದಾರೆ. ಈ 10 ಎಕರೆ ಪ್ರದೇಶದಲ್ಲಿ ಅತ್ಯಾಧುನಿಕ ಸೌಲಭ್ಯಗಳನ್ನು ಒಳಗೊಂಡ ವಸತಿ ಶಾಲೆ ನಿರ್ಮಾಣವಾಗಲಿದ್ದು, ಕಾರ್ಮಿಕರ ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಜೊತೆಗೆ ಉತ್ತಮ ವಸತಿ ಮತ್ತು ಕಲಿಕಾ ವಾತಾವರಣ ದೊರೆಯಲಿದೆ. ಕಾರ್ಮಿಕರ ಮಕ್ಕಳ ಭವಿ ್ಯಕ್ಕೆ ಉತ್ತಮ ಶಿಕ್ಷಣವೇ ಬಲ. ಅವರ ಕನಸುಗಳಿಗೆ ಅವಕಾಶ ಕಲ್ಪಿಸುವುದೇ ಗ್ಯಾರಂಟಿ ಸರ್ಕಾರದ ಆದ್ಯತೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್ ಮೂಲಕ ಹೇಳಿದ್ದಾರೆ.

<><><>

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:**

<><><>

- **ಕರ್ನಾಟಕದ ನೂತನ ರಾಜ್ಯಪಾಲರಾಗಿ ಡಾಕ್ಟರ ಸುಧಾ ಯಾದವ ನೇಮಕ.**

- ಕ್ರೀಡಾ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ; ರಾಜ್ಯದ 14 ಜಿಲ್ಲೆಗಳಲ್ಲಿ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣಕ್ಕೆ ಕ್ರಮ – ಉಪಮುಖ್ಯಮಂತ್ರಿ ಡಾಕ್ಟರ್ ಜಿ. ಪರಮೇಶ್ವರ.

- ರಾಜ್ಯದ ರೈಲ್ವೇ ಕ್ಷೇತ್ರದ ವಿಕಾಸಕ್ಕಾಗಿ ಕೇಂದ್ರ ಸರ್ಕಾರದ ಐತಿಹಾಸಿಕ ನಿರ್ಣಯ – ಕೇಂದ್ರ ಸಚಿವ ವಿ. ಸೋಮಣ್ಣ.

- 'ಪ್ರಧಾನ ಮಂತ್ರಿ ಉಜ್ವಲ ಯೋಜನೆ' ಬಡ ಕುಟುಂಬಗಳ ಮಹಿಳೆಯರ ಘನತೆ, ಆರೋಗ್ಯ ಮತ್ತು ಸಮಾನ ಅವಕಾಶಗಳ ಗುರಿ ಸಾಧನೆ.

- ಕಬ್ಬು ಬೆಳೆಗಾರರ ಸಮಸ್ಯೆ ನಿವಾರಣೆಗೆ ಉನ್ನತ ಮಟ್ಟದಜಂಟಿ ಸಮಿತಿ ರಚನೆಗೆ ನಿರ್ಧಾರ– ಕೇಂದ್ರ ಸಚಿವ ಪ್ರಲ್ಹಾದ ಜೋಶಿ

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು. ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 7 ಗಂಟೆ 35 ನಿಮಿಷಕ್ಕೆ

<><><> <><><>